# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 13+16+28+73+131* |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | 1.ಶ್ರೀ ಟಿ.ಎನ್. ಜವರಾಯಿಗೌಡ<br>(ವಿಧಾನ ಸಭೆಯಿಂದ ಚುನಾಯಿತರಾದವರು)<br>2.ಶ್ರೀ ಐವನ್ ಡಿ" ಸೋಜಾ<br>(ವಿಧಾನ ಸಭೆಯಿಂದ ಚುನಾಯಿತರಾದವರು)<br>3.ಶ್ರೀ ಸಿ.ಟಿ ರವಿ<br>(ವಿಧಾನ ಸಭೆಯಿಂದ ಚುನಾಯಿತರಾದವರು)<br>4.ಶ್ರೀ ಶರವಣ ಟಿ.ಎ.<br>(ವಿಧಾನ ಸಭೆಯಿಂದ ಚುನಾಯಿತರಾದವರು)<br>5. ಶ್ರೀ ನಿರಾಣಿ ಹಣಮಂತ್ ರುದ್ರಪ್ಪ<br>(ಪದವೀಧರರ ಕ್ಷೇತ್ರ) ಮತ್ತು ಇತರರು |
| ಉತ್ತರಿಸಬೇಕಾದ ದಿನಾಂಕ | : | 09.12.2024 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಬಿ.ಪಿ.ಎಲ್ ಕಾರ್ಡುಗಳ ಸಂಖ್ಯೆ ಎಷ್ಟು; ಈ ಬಿ.ಪಿ.ಎಲ್ ಕಾರ್ಡುಗಳನ್ನು ಫಲಾನುಭವಿಗಳಿಗೆ ಯಾವ ಮಾನದಂಡವನ್ನು ಅನುಸರಿಸಿ ವಿತರಣೆ ಮಾಡಲಾಗಿದೆ; (ಜಿಲ್ಲಾವಾರು ಅಂಕಿ ಅಂಶಗಳ ಸಹಿತ ಸರ್ಕಾರದ ಆದೇಶ/ಸುತ್ತೋಲೆಯ ಪ್ರತಿಯನ್ನು ನೀಡುವುದು) | ರಾಜ್ಯದಲ್ಲಿ ಚಾಲ್ತಿಯಲ್ಲಿರುವ ಆದ್ಯತಾ/ಅಂತ್ಯೋದಯ ಪಡಿತರ ಚೀಟಿಗಳ ವಿವರ ಈ ಕೆಳಗಿನಂತಿವೆ:- |

| ಅಂತ್ಯೋದಯ ಅನ್ನ | ಪಡಿತರ ಚೀಟಿಗಳು | ಫಲಾನುಭವಿಗಳ ಸಂಖ್ಯೆ |
|---|---|---|
| | 10,80, 648 | 43,66,756 |
| ಆದ್ಯತಾ | 1,17,58,582 | 3,98,89,368 |
| ಒಟ್ಟು | 1,28,39,230 | 4,42,56,124 |

ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ ಹೊರಗಿಡುವ ಮಾನದಂಡಗಳನ್ನು ರೂಪಿಸಲಾಗಿದೆ.

- ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.

| | | |
|---|---|---|
| | | • ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>• ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>• ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಜಿಲ್ಲಾವಾರು ಮಾಹಿತಿಯನ್ನು ಅನುಬಂಧ-1 ರಲ್ಲಿ ಹಾಗೂ ಸರ್ಕಾರದ ಆದೇಶವನ್ನು 2 ರಲ್ಲಿ ಒದಗಿಸಲಾಗಿದೆ. |
| ಆ | ರಾಜ್ಯದಲ್ಲಿ ಅನರ್ಹರಿಗೆ ಬಿಪಿಎಲ್ ಕಾರ್ಡುಗಳನ್ನು ವಿತರಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇಲ್ಲಿಯ ತನಕ ಎಷ್ಟು ವಿತರಿಸಿರುವ ಅನರ್ಹ ಬಿಪಿಎಲ್ ಕಾರ್ಡು ಗಳನ್ನು ಹಾಗೂ ಅರ್ಹ ಫಲಾನುಭವಿಗಳ ಕಾರ್ಡುಗಳನ್ನು ರದ್ದುಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಇದನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು (ಜಿಲ್ಲಾವಾರು, ವರ್ಗಾವಾರು ಮಾಹಿತಿ ನೀಡುವುದು) | ಬಂದಿರುತ್ತದೆ.<br>ಸರ್ಕಾರವು ರೂಪಿಸಿರುವ ಮಾನದಂಡಗಳಿಗೆ ವಿರುದ್ಧವಾಗಿ ಪಡಿತರ ಚೀಟಿ ಪಡೆದವರ ಮಾಹಿತಿಯನ್ನು ಕುಟುಂಬ ತಂತ್ರಾಂಶದಿಂದ ಪಡೆದಿದ್ದು, ಆದಾಯ ತೆರಿಗೆ ಪಾವತಿದಾರರು, ವಾರ್ಷಿಕ ಆದಾಯ ರೂ.1.20 ಲಕ್ಷಕ್ಕಿಂತ ಹೆಚ್ಚಿರುವ ಫಲಾನುಭವಿಗಳು, ಸರ್ಕಾರಿ ನೌಕರರು, ಮೃತ ಫಲಾನುಭವಿಗಳು, ಮತ್ತು 6 ತಿಂಗಳಿನಿಂದ ನಿರಂತರವಾಗಿ ಪಡಿತರವನ್ನು ಪಡೆಯದೇ ಇರುವ ಆದ್ಯತಾ ಪಡಿತರ ಚೀಟಿದಾರರ ಮಾಹಿತಿಯನ್ನು ಪಡೆಯಲಾಗಿರುತ್ತದೆ.<br>ಇದರಲ್ಲಿ ಮೃತ ಫಲಾನುಭವಿಗಳನ್ನು ತಂತ್ರಾಂಶದಿಂದ ರದ್ದುಪಡಿಸಲಾಗಿದ್ದು, ಉಳಿದ ಫಲಾನುಭವಿಗಳ ಪಡಿತರ ಚೀಟಿಯನ್ನು ಅಮಾನತ್ತು/ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗಿತ್ತು.<br>ದಿನಾಂಕ: 22.11.2024 ರ ಪತ್ರದಲ್ಲಿ ನೀಡಿದ ನಿರ್ದೇಶನದಂತೆ ರಾಜ್ಯದಲ್ಲಿ ಆದಾಯ ತೆರಿಗೆ ಪಾವತಿದಾರರು ಹಾಗೂ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ಎಲ್ಲಾ ಪಡಿತರ ಚೀಟಿಗಳನ್ನು ಹಿಂದಿನಂತೆಯೇ ಆದ್ಯತಾ ಪಡಿತರ ಚೀಟಿಗಳನ್ನಾಗಿ ಮರು ಸ್ಥಾಪಿಸಲಾಗಿರುತ್ತದೆ. ಮರು ಸ್ಥಾಪಿಸಲಾದ ಪಡಿತರ ಚೀಟಿಗಳ ವಿವರಗಳನ್ನು ಅನುಬಂಧ-3 ರಲ್ಲಿ ಒದಗಿಸಲಾಗಿದೆ. |

| | | |
|---|---|---|
| ಇ | ಸರ್ಕಾರಿ ನೌಕರರು, ಆದಾಯ ತೆರಿಗೆ ಪಾವತಿದಾರರು, ಜಿಎಸ್‌ಟಿ/ಸಿಎಸ್‌ಟಿ ತೆರಿಗೆ ಪಾವತಿದಾರರಿಗೂ ಬಿಪಿಎಲ್ ಕಾರ್ಡು ವಿತರಿಸಲು ಕಾರಣವೇನು: ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ. ಸದರಿ ಅಧಿಕಾರಿ/ನೌಕರರ ವಿರುದ್ಧ ಜರುಗಿಸಲಾಗಿರುವ ಕ್ರಮಗಳೇನು | ಈ ಹಿಂದೆ ಕೆಲವು ಆದ್ಯತಾ ಪಡಿತರ ಚೀಟಿ ಹೊಂದಲು ಅರ್ಹರಿದ್ದ ಫಲಾನುಭವಿಗಳು ಹಾಲಿ ಬಡತನ ರೇಖೆಗಿಂತ ಮೇಲೆ ಬಂದಿರುತ್ತಾರೆ. ಹಾಗೂ ಹಾಲಿ ಸರ್ಕಾರಿ ನೌಕರಿಗೆ ಸೇರಿದ್ದು, ಸರ್ಕಾರಿ ನೌಕರಿ ಸೇರುವ ಮುಂಚೆ ಆದ್ಯತಾ ಪಡಿತರ ಚೀಟಿಯನ್ನು ಪಡೆದವರಗಾಗಿರುತ್ತಾರೆ. ಇಂತಹ ಫಲಾನುಭವಿಗಳ ವಿವರಗಳನ್ನು ಕುಟುಂಬ ತಂತ್ರಾಂಶದಿಂದ ಪಡೆದು ಸದರಿಯವರಿಂದ ದಂಡ ವಸೂಲಿ ಮಾಡಲಾಗುತ್ತಿದೆ. ಹಾಗೂ ಸದರಿ ಪಡಿತರ ಚೀಟಿಗಳನ್ನು ಆದ್ಯತೇತರ ಪಡಿತರ ಚೀಟಿಗಳನ್ನಾಗಿ ಪರಿವರ್ತಿಸಲು ಕ್ರಮ ವಹಿಸಲಾಗುತ್ತಿದೆ. |
| ಈ | ಅನರ್ಹ ಕುಟುಂಬಗಳಿಗೆ ಬಿಪಿಎಲ್ ಕಾರ್ಡು ವಿತರಿಸಲಾಗಿರುವುದರಿಂದ ಸರ್ಕಾರಕ್ಕೆ ಉಂಟಾದ ನಷ್ಟ ಎಷ್ಟು: ಅನರ್ಹರಿಗೆ ನೀಡಿದ ಸವಲತ್ತುಗಳಿಂದ ಉಂಟಾದ ನಷ್ಟವನ್ನು ಭರಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು | ರಾಜ್ಯಾದ್ಯಂತ ಜನವರಿ-2021 ರಿಂದ ಮೇ-2023ರ ಅವಧಿಯಲ್ಲಿ 3,35,463 ಅನರ್ಹ ಆದ್ಯತಾ ಪಡಿತರ ಚೀಟಿಗಳನ್ನು ಪತ್ತೆ ಹಚ್ಚಲಾಗಿದ್ದು ಇವರಿಂದ ರೂ. 13,51,30,858/- ಗಳನ್ನು ದಂಡವನ್ನು ವಿಧಿಸಲಾಗಿರುತ್ತದೆ. |
| ಉ | ಸರ್ಕಾರವು ಅಕ್ರಮ ಪಡಿತರ ವಿರುದ್ಧ ಕಾರ್ಯಾಚರಣೆ ನಡೆಸಲಾಗುವುದೆಂದು ಹೇಳಿ ಆಹಾರ ಇಲಾಖೆಯ ಉಗ್ರಾಣಗಳಿಂದ ಅಕ್ರಮವಾಗಿ ಕಾಳ ಸಂತೆಯಲ್ಲಿ ಅಕ್ಕಿ ಮಾರಾಟವಾಗುತ್ತಿರುವುದನ್ನು ತಪ್ಪಿಸಲು ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) | ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುವ ಪಡಿತರ ಅಕ್ರಮ ಸಾಗಾಣಿಕೆ ಕಂಡು ಬಂದಲ್ಲಿ ಕೂಡಲೇ ದಾಳಿ ನಡೆಸಿ, ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಪ್ರಕರಣ ದಾಖಲಿಸಿ, ಅಕ್ರಮ ಪಡಿತರ ದಾಸ್ತಾನು ಮುಟ್ಟುಗೋಲು ಹಾಕಿಕೊಂಡು, ಜಿಲ್ಲಾಧಿಕಾರಿಗಳ ನ್ಯಾಯಾಲಯದಲ್ಲಿ ವಿಚಾರಣೆ ನಡೆಸಿ, ಮುಟ್ಟುಗೋಲು ದಾಸ್ತಾನನ್ನು ವಿಲೇ ಮಾಡಿ, ವಿಲೇ ಪಡಿಸಿದ ಪಡಿತರ ಮೊತ್ತವನ್ನು ಸರ್ಕಾರಕ್ಕ ಜಮೆ ಮಾಡಲಾಗುತ್ತಿದೆ.<br>ಪ್ರಕರಣದಲ್ಲಿ ತಪ್ಪಿಸ್ಥರೆಂದು ಸಾಬೀತಾದ ವ್ಯಕ್ತಿಗಳ ವಿರುದ್ಧ ಆರೋಪ ಸಾಬೀತಾದಲ್ಲಿ ನ್ಯಾಯಾಲಯದ ಆದೇಶದಂತೆ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ.<br>ರಾಜ್ಯಾದ್ಯಂತ 2024-25ನೇ ಸಾಲಿನಲ್ಲಿ 213 ಎಫ್.ಐ.ಆರ್ ದಾಖಲಿಸಿ ಒಟ್ಟು ರೂ. 2,68,07,872/- ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡು, 238 ಆರೋಪಿಗಳನ್ನು ಬಂಧಿಸಲಾಗಿರುತ್ತದೆ. ಈ ಕುರಿತು ಪರಿಶೀಲಿಸಲು ಮೇಲ್ವಿಚಾರಣೆ ಮಾಡಲು ಇಲಾಖಾ ವತಿಯಿಂದ ನೋಡಲ್ ಅಧಿಕಾರಿಗಳನ್ನು ವಿಭಾಗವಾರು ನೇಮಕ ಮಾಡಲಾಗಿರುತ್ತದೆ. |

| | | |
|---|---|---|
| ಊ | ರಾಜ್ಯದಲ್ಲಿ ಬಿಪಿಎಲ್ ಕಾರ್ಡುಗಳನ್ನು ಕಳೆದುಕೊಂಡ ಬಡ ಕುಟುಂಬಗಳು ಶಸ್ತ್ರ ಚಿಕಿತ್ಸೆಗಳಿಗಾಗಿ ಆಸ್ಪತ್ರೆಗಳಲ್ಲಿ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು (ವಿವರ ನೀಡುವುದು) | ತುರ್ತು ವೈದ್ಯಕೀಯ ಪರಿಸ್ಥಿತಿಗಳ ಹಿನ್ನೆಲೆಯಲ್ಲಿ ಅರ್ಹ ಆದ್ಯತಾ ಪಡಿತರ ಚೀಟಿದಾರರಿಗೆ ನಿರಂತರವಾಗಿ ಪಡಿತರ ಚೀಟಿ ನೀಡುವ ಕಾರ್ಯ/ಪಡಿತರ ಚೀಟಿ ತಿದ್ದುಪಡಿ/ಸೇರ್ಪಡೆ ಕಾರ್ಯ ಪ್ರಗತಿಯಲ್ಲಿರುತ್ತದೆ. |
| ಋ | ಬಿಪಿಎಲ್ ಪಡಿತರ ಚೀಟಿಗಾಗಿ ಸಲ್ಲಿಕೆಯಾಗಿರುವ ಹಾಗೂ ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯಲ್ಲಿ ವಿಲೇ ಮಾಡಲಾಗುವುದು? | ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಆದೇಶಿಸಲಾಗಿರುತ್ತದೆ. ಇದರಲ್ಲಿ ಅರ್ಹರಿರುವ 2,34,631 ಅರ್ಜಿಗಳ ಪೈಕಿ 1,69,630 ಅರ್ಜಿಗಳನ್ನು ಅನುಮೋದಿಸಲಾಗಿದೆ. ಹಾಗೂ 59,528 ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ<br>ಪ್ರಸ್ತುತ ಆಹಾರ ಇಲಾಖೆಯಲ್ಲಿ ಬಳಸಲಾಗುತ್ತಿರುವ ಸರ್ವರ್ ಹಳೆಯದಾಗಿದ್ದು, ಈ ಕಾರಣದಿಂದಾಗಿ ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ (Karnataka State Data Centre) ಗೆ ಆಹಾರ ತಂತ್ರಾಂಶದ Migration ಕಾರ್ಯವು ಅಂತಿಮ ಹಂತದಲ್ಲಿದ್ದು, ಎನ್.ಐ.ಸಿ ಯಿಂದ ಕೆ.ಎಸ್.ಡಿ.ಸಿ 'ಗೆ Migration ಕಾರ್ಯ ಪೂರ್ಣಗೊಂಡ ನಂತರ ಆದ್ಯತಾ ಪಡಿತರ ಚೀಟಿ ನೀಡುವ ಕಾರ್ಯ/ ಪಡಿತರ ಚೀಟಿ ತಿದ್ದುಪಡಿ ಮಾಡುವ ಪ್ರಕ್ರಿಯೆ ನಿರಂತರವಾಗಿರುತ್ತದೆ. |

ಆನಾಸ 353 ಡಿಆರ್‌ಎ 2024

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು

ಶ್ರೀ/ಶ್ರೀಮತಿ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಪರಿಷತ್ತಿನಿಂದ ಚುನಾಯಿತರಾದವರು), ಶ್ರೀ ಐವನ್ ಡಿ" ಸೋಜಾ (ವಿಧಾನ ಪರಿಷತ್ತಿನಿಂದ ಚುನಾಯಿತರಾದವರು), ಶ್ರೀ ಸಿ.ಟಿ ರವಿ (ವಿಧಾನ ಪರಿಷತ್ತಿನಿಂದ ಚುನಾಯಿತರಾದವರು), ಶ್ರೀ ಶರವಣ ಟಿ.ಎ (ವಿಧಾನ ಪರಿಷತ್ತಿನಿಂದ ಚುನಾಯಿತರಾದವರು), ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ವಿಧಾನ ಪರಿಷತ್ತಿನಿಂದ ಚುನಾಯಿತರಾದವರು), ವಿಧಾನ ಪರಿಷತ್ತಿನ ಸದಸ್ಯರು ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 13+16+28+73+131

## ಅನುಬಂಧ -1

| Sl. No. | DISTRICT NAME | AAY RCs | AAY Beneficiaries | PHH RCs | PHH Beneficiaries | NPHH RCs | NPHH Beneficiaries | TOTAL RCs | TOTAL Beneficiaries |
|---|---|---|---|---|---|---|---|---|---|
| 1 | BAGALKOTE | 45624 | 187548 | 374884 | 1306545 | 64277 | 186032 | 484785 | 1680125 |
| 2 | BALLARI | 25861 | 100987 | 277733 | 1021049 | 43982 | 154147 | 347576 | 1276183 |
| 3 | BANGALORE EAST | 2438 | 10137 | 83003 | 290214 | 85308 | 303679 | 170749 | 604030 |
| 4 | BANGALORE NORTH | 2576 | 10852 | 113616 | 418558 | 68199 | 242180 | 184391 | 671590 |
| 5 | BANGALORE SOUTH | 5509 | 22606 | 113677 | 402554 | 75177 | 268996 | 194363 | 694156 |
| 6 | BANGALORE WEST | 4427 | 17685 | 189524 | 651015 | 106582 | 382459 | 300533 | 1051159 |
| 7 | BELAGAVI | 67934 | 265720 | 1078420 | 3560555 | 325037 | 1102421 | 1471391 | 4928696 |
| 8 | BENGALURU | 12541 | 55142 | 492519 | 1638129 | 104771 | 346666 | 609831 | 2039937 |
| 9 | BENGALURU RURAL | 14186 | 61281 | 216562 | 734982 | 23923 | 85734 | 254671 | 881997 |
| 10 | BIDAR | 39954 | 152626 | 317958 | 1130845 | 54618 | 181657 | 412530 | 1465128 |
| 11 | CHAMARAJANAGAR | 35521 | 132490 | 254532 | 743409 | 14873 | 41569 | 304926 | 917468 |
| 12 | CHIKKABALLAPURA | 28185 | 118172 | 281552 | 911424 | 21072 | 67219 | 330809 | 1096815 |
| 13 | CHIKKAMAGALURU | 22127 | 86085 | 241049 | 761120 | 65330 | 221434 | 328506 | 1068639 |
| 14 | CHITRADURGA | 41963 | 172945 | 360176 | 1217712 | 45866 | 146032 | 448005 | 1536689 |

...ರು (ಐಟಿ)

... ಮತ್ತು

| | | | | | | | | | |
|---|---|---|---|---|---|---|---|---|---|
| 15 | DAKSHINA KANNAD | 22871 | 113681 | 258472 | 1032840 | 174336 | 675509 | 455679 | 1822030 |
| 16 | DAVANAGERE | 45256 | 189003 | 329120 | 1128178 | 46601 | 159139 | 420977 | 1476320 |
| 17 | DHARWAR | 29537 | 115718 | 361779 | 1244609 | 96698 | 330728 | 488014 | 1691055 |
| 18 | GADAG | 28318 | 108475 | 232877 | 741541 | 39061 | 130068 | 300256 | 980084 |
| 19 | HASSAN | 23363 | 96187 | 429857 | 1390791 | 43929 | 127553 | 497149 | 1614531 |
| 20 | HAVERI | 46764 | 195175 | 350904 | 1219231 | 56499 | 200885 | 454167 | 1615291 |
| 21 | KALABURAGI | 62186 | 235391 | 518095 | 1780483 | 116308 | 415323 | 696589 | 2431197 |
| 22 | KODAGU | 9432 | 30629 | 100379 | 304421 | 37822 | 102690 | 147633 | 437740 |
| 23 | KOLAR | 29680 | 117638 | 312969 | 1085852 | 36291 | 124063 | 378940 | 1327553 |
| 24 | KOPPAL | 37292 | 147648 | 291387 | 1048695 | 27668 | 86421 | 356347 | 1282764 |
| 25 | MANDYA | 34093 | 138373 | 442593 | 1415781 | 57732 | 192391 | 534418 | 1746545 |
| 26 | MYSURU | 50042 | 210872 | 655411 | 2055532 | 115219 | 390078 | 820672 | 2656482 |
| 27 | RAICHUR | 52122 | 191628 | 407712 | 1385933 | 42865 | 137119 | 502699 | 1714680 |
| 28 | RAMANAGARA | 18823 | 75667 | 276055 | 871529 | 18226 | 52106 | 313104 | 999302 |
| 29 | SHIVAMOGGA | 37727 | 164742 | 354259 | 1180759 | 103686 | 361329 | 495672 | 1706830 |
| 30 | TUMAKURU | 49347 | 196303 | 602958 | 2020366 | 67182 | 208947 | 719487 | 2425616 |
| 31 | UDUPI | 28125 | 146806 | 170449 | 680964 | 115491 | 482630 | 314065 | 1310400 |
| 32 | UTTARA KANNADA | 16115 | 66133 | 294804 | 1035320 | 90512 | 302990 | 401431 | 1404443 |
| 33 | VIJAYANAGARA | 40402 | 160391 | 261231 | 949965 | 33533 | 115690 | 335166 | 1226046 |
| 34 | VIJAYAPURA | 41166 | 158147 | 468709 | 1619295 | 88702 | 260368 | 598577 | 2037810 |
| 35 | YADGIR | 29141 | 113873 | 243357 | 909172 | 18042 | 59376 | 290540 | 1082421 |
| | **TOTAL** | **1080648** | **4366756** | **11758582** | **39889368** | **2525418** | **8645628** | **15364648** | **52901752** |

ಅನುಬಂಧ - 2
LAQ - 13+16+28 +73+131

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾರ್ವಜನಿಕ ಪಡಿತರ ವಿತರಣಾ ಪದ್ಧತಿಯಡಿ ಆದ್ಯತೇತರ ಕುಟುಂಬಗಳನ್ನು ಗುರುತಿಸಲು ಪ್ರಸ್ತುತ ಇರುವ ಹೊರಗಿಡುವ ಮಾನದಂಡಗಳನ್ನು (Exclusion Criteria) ಪರಿಷ್ಕರಿಸುವ ಬಗ್ಗೆ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ ಆನಾಸ 116 ಡಿಆರ್‌ಎ 2015, ಬೆಂಗಳೂರು, ದಿನಾಂಕ: 16ನೇ ಆಗಸ್ಟ್ 2016.

ಪ್ರಸ್ತಾವನೆ:

ಮೇಲೆ ಓದಲಾದ ಆದೇಶದಲ್ಲಿ ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ-2013 ರಂತೆ ಆದ್ಯತಾ ಪಡಿತರ ಚೀಟಿ ಪಡೆಯಲು ಅರ್ಹರಿರುವ ಕುಟುಂಬಗಳನ್ನು ಗುರುತಿಸಲು 4 ಹೊರಗಿಡುವ ಮಾನದಂಡಗಳನ್ನು (Exclusion Criteria) ನಿಗಧಿಪಡಿಸಲಾಗಿರುತ್ತದೆ. ಈ ಮಾನದಂಡಗಳಲ್ಲಿ ಕುಟುಂಬದ ವಾರ್ಷಿಕ ಆದಾಯಕ್ಕೆ ಸಂಬಂಧಿಸಿದಂತೆ ನಿರ್ದಿಷ್ಟವಾದ ಮಾನದಂಡವು ಇಲ್ಲದೇ ಇರುವುದರಿಂದ, ಇವುಗಳೊಂದಿಗೆ 5ನೇ ಮಾನದಂಡವನ್ನು ಈ ಕೆಳಗಿನಂತೆ ಸೇರ್ಪಡೆಗೊಳಿಸಿ ಈ ಕೆಳಕಂಡಂತೆ ಆದೇಶ;

**ಸರ್ಕಾರಿ ಆದೇಶ ಸಂ: ಆನಾಸ 116 ಡಿಆರ್‌ಎ 2015,**
**ಬೆಂಗಳೂರು, ದಿನಾಂಕ: 25.03.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಮೇಲೆ ತಿಳಿಸಲಾದ ಸರ್ಕಾರದ ಆದೇಶ ಸಂಖ್ಯೆ ಆನಾಸ 116 ಡಿಆರ್‌ಎ 2015, **ಬೆಂಗಳೂರು, ದಿನಾಂಕ: 16ನೇ ಆಗಸ್ಟ್ 2016ನ್ನು ಈ ಮೂಲಕ ಮಾರ್ಪಡಿಸಿದ್ದು, ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಿ ಆದ್ಯತೇತರ ಕುಟುಂಬಗಳನ್ನು ಗುರುತಿಸಲು ಆದೇಶಿಸಲಾಗಿದೆ.**

1) ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ, ಸರ್ಕಾರದ ಅಥವಾ ಸರ್ಕಾರದಿಂದ ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ, ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ; ಒಳಗೊಂಡಂತೆ ಆದಾಯ ತೆರಿಗೆ/ಸೇವಾ ತೆರಿಗೆ/ ವ್ಯಾಟ್/ ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.
2) ಗ್ರಾಮೀಣ ಪ್ರದೇಶದಲ್ಲಿ 3 ಹೆಕ್ಟೇರ್ ಒಣಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾ ಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.
3) ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ, ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು,
4) ಪ್ರತಿ ಮಾಹೆ 150 ಯುನಿಟ್‌ಗಳಿಗಿಂತಲೂ ಹೆಚ್ಚಿನ ವಿದ್ಯುತ್‌ಶಕ್ತಿಯನ್ನು ಬಳಕೆ ಮಾಡುವ ಕುಟುಂಬಗಳು.
5) ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.

ಮೇಲೆ ತಿಳಿಸಿರುವಂತೆ ಗುರುತಿಸಲಾದ ಆದ್ಯತೇತರ ಕುಟುಂಬಗಳನ್ನು ಹೊರತುಪಡಿಸಿ, ಉಳಿದ ಕುಟುಂಬಗಳು ಆದ್ಯತಾ ಪಡಿತರ ಚೀಟಿಯನ್ನು ಪಡೆಯಲು ಅರ್ಹ ಕುಟುಂಬವೆಂದು ಪರಿಗಣಿಸತಕ್ಕದ್ದು.

ಈ ಆದೇಶವು ತಕ್ಷಣದಿಂದಲೇ ಜಾರಿಗೆ ಬರತಕ್ಕದ್ದು.

ಈ ಆದೇಶವನ್ನು ಕಡತ ಸಂಖ್ಯೆ ಆನಾಸ 538 ಡಿಆರ್‌ಎ 2015ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

25/3/2017
(ಅರ್ಚನ ಎಂ.ಎಸ್.)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ
c/c ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ.

ಇವರಿಗೆ:

ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರು ಮುಂದಿನ ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸುವುದು.

ಪ್ರತಿಗಳು:

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ. 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ. 5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ. 5329. ಬೆಂಗಳೂರು-560001.
4. ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
7. ಎಲ್ಲಾ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ. (ಆಯುಕ್ತರು. ಆಹಾರ. ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ. ಬೆಂಗಳೂರು ಇವರ ಮುಖಾಂತರ)
8. ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ. (ವ್ಯವಸ್ಥಾಪಕರು. ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು ಇವರ ಮುಖಾಂತರ)
9. ನಿರ್ದೇಶಕರು, ಖಜಾನೆ ಇಲಾಖೆ, ಮೊದಲನೆ ಮಹಡಿ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಡಾ:ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು.
10. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ / ನಗರಾಭಿವೃದ್ಧಿ ಇಲಾಖೆ / ಸಾರಿಗೆ ಇಲಾಖೆ / ಕಂದಾಯ ಇಲಾಖೆ / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಬೆಂಗಳೂರು.
12. ಶಾಖಾ ರಕ್ಷಾ ಕಡತ/ವಾರದ ರಾಜ್ಯಪತ್ರ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ.
2. ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ.

# ಕರ್ನಾಟಕ ಸರ್ಕಾರ

ಸಂಖ್ಯೆ: ಆನಾಸ 116 ಡಿಆರ್‌ಎ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 20.05.2017

## ಮಾರ್ಪಾಡು ಆದೇಶ

ಸಾರ್ವಜನಿಕ ಪಡಿತರ ವಿತರಣಾ ಪದ್ಧತಿಯಡಿ ಆದ್ಯತೇತರ ಕುಟುಂಬಗಳನ್ನು ಗುರುತಿಸಲು ಹೊರಗಿಡುವ ಮಾನದಂಡಗಳನ್ನು (Exclusion Criteria) ಪರಿಷ್ಕರಿಸಿ ಸರ್ಕಾರದಿಂದ ಹೊರಡಿಸಲಾದ ಆದೇಶ ಸಂ: ಆನಾಸ 116 ಡಿಆರ್‌ಎ 2015, ಬೆಂಗಳೂರು, ದಿನಾಂಕ: 16.08.2016 ಹಾಗೂ 25.03.2017 ಗಳಲ್ಲಿ 4ನೇ ಮಾನದಂಡ "ಪ್ರತಿ ಮಾಹೆ 150 ಯುನಿಟ್‌ಗಳಿಗಿಂತಲೂ ಹೆಚ್ಚಿನ ವಿದ್ಯುತ್‌ಚ್ಛಕ್ತಿಯನ್ನು ಬಳಕೆ ಮಾಡುವ ಕುಟುಂಬಗಳು" ವನ್ನು ಕೈಬಿಡಲಾಗಿದೆ.

ಉಳಿದಂತೆ ಸದರಿ ಆದೇಶಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

ಅರ್ಚನ ಎಂ.ಎಸ್. 20/5/2017
(ಅರ್ಚನ ಎಂ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಆಹಾರ, ನಾಗರಿಕ ಸರಬರಾಜು, ಗ್ರಾಹಕರ ವ್ಯವಹಾರಗಳ
ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ.

**ಇವರಿಗೆ:**
**ಸಂಕಲನಾಧಿಕಾರಿಗಳು,** ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರು ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 200 ಪ್ರತಿಗಳನ್ನು ಒದಗಿಸುವುದು.

ಪ್ರತಿಗಳು:
1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ" ಅಂಚೆ ಪೆಟ್ಟಿಗೆ ಸಂಖ್ಯೆ 5398, ಬೆಂಗಳೂರು-560001.
3) ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ 5329, ಬೆಂಗಳೂರು-560001.
4) ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಬೆಂಗಳೂರು.
5) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು.
6) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.

7) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು (ಪ್ರಕರಣ ಸಂ: ಸಿ:253/2017, ದಿನಾಂಕ: 17.05.2017)
8) ಎಲ್ಲಾ ಉಪನಿರ್ದೇಶಕರು/ ಸಹಾಯಕ ನಿರ್ದೇಶಕರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ (ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ- ಇವರ ಮೂಲಕ)
9) ಎಲ್ಲಾ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ (ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತ- ಇವರ ಮೂಲಕ)
10) ಖಜಾನೆ ನಿರ್ದೇಶಕರು, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಮಿನಿ ಗೋಪುರ, ಡಾ: ಬಿ.ಆರ್.ಅಂಬೇಡ್ಕರ್ ರಸ್ತೆ, ಬೆಂಗಳೂರು.
11) ನಿರ್ದೇಶಕರು, ಅಟಲ್‌ಜಿ ಜನಸ್ನೇಹಿ ಕೇಂದ್ರ, ಬೆಂಗಳೂರು.
12) ಸೀನಿಯರ್ ಟೆಕ್ನಿಕಲ್ ಡೈರೆಕ್ಟರ್, ಎನ್.ಐ.ಸಿ, ವಾಣಿಜ್ಯ ತೆರಿಗೆ ಇಲಾಖೆಯ ಕಟ್ಟಡ, ಗಾಂಧಿನಗರ, ಬೆಂಗಳೂರು.
13) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
14) ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ/ ನಗರಾಭಿವೃದ್ಧಿ ಇಲಾಖೆ/ ಸಾರಿಗೆ ಇಲಾಖೆ, ಕಂದಾಯ ಇಲಾಖೆ, ಬೆಂಗಳೂರು
15) ಶಾಖಾ ರಕ್ಷಾ ಕಡತ/ವಾರದ ರಾಜ್ಯಪತ್ರ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1) ಸನ್ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3) ಕಾರ್ಯದರ್ಶಿಗಳು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
4) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.